# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | 564 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | : | 20-02-2023 |
| **ಉತ್ತರಿಸುವ ಸಚಿವರು** | : | ಪ್ರವಾಸೋದ್ಯಮ, ಜೀವಿಶಾಸ್ತ್ರ,<br>ಹಾಗೂ ಪರಿಸರ ಸಚಿವರು |

<table>
<tr><th>ಕ್ರ.<br>ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಪರಿಸರಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ರೂಪಿಸಿರುವ ಪ್ರವಾಸಿಸ್ನೇಹಿ ಯೋಜನೆಗಳೇನು;</td><td>ಕರ್ನಾಟಕ ಪ್ರವಾಸೋದ್ಯಮ ನೀತಿ 2020-26ರ ಅಡಿಯಲ್ಲಿ ರಾಜ್ಯದಲ್ಲಿ ಗುರುತಿಸಲಾದ ಪ್ರವಾಸಿ ತಾಣಗಳಲ್ಲಿ ಪ್ರವಾಸೋದ್ಯಮ ಯೋಜನೆಗಳಲ್ಲಿ ಪರಿಸರ ಸ್ನೇಹಿ ಹಾಗೂ ಸುಸ್ಥಿರ ಪ್ರವಾಸೋದ್ಯಮ ಉಪಕ್ರಮಗಳನ್ನು ಅಳವಡಿಸಿಕೊಂಡಿರುವ ಹಾಗೂ ಇಲಾಖೆಯಲ್ಲಿ ನೋಂದಾಯಿತವಾಗಿರುವ ಸಂಸ್ಥೆಗಳಿಗೆ ಈ ಕೆಳಕಂಡಂತೆ ಆರ್ಥಿಕ ನೆರವನ್ನು ನೀಡಲು ಪ್ರಸ್ತಾಪಿಸಲಾಗಿದೆ.<br><br>
<table>
<tr><th>ಕ್ರ.<br>ಸಂ</th><th>ಕ್ರಮ</th><th>ಆರ್ಥಿಕ ನೆರವು</th><th>ಪ್ರತಿ ಪ್ರವಾಸೋದ್ಯಮ ಯೋಜನೆಯ ಸಹಾಯಧನಕ್ಕೆ ಸಂಬಂಧಿಸಿದ ಗರಿಷ್ಠ ಮೊತ್ತ</th></tr>
<tr><td>1</td><td>ಜಲ ಸಂರಕ್ಷಣೆ ಮತ್ತು ಮಳೆ ನೀರು ಸಂಗ್ರಹ</td><td>ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು</td><td>ರೂ.1.00 ಲಕ್ಷ</td></tr>
<tr><td>2</td><td>ನವೀಕರಿಸಬಹುದಾದ ಇಂಧನ ಮೂಲಗಳ ಅಳವಡಿಕೆ</td><td>ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು</td><td>ರೂ.1.00 ಲಕ್ಷ</td></tr>
<tr><td>3</td><td>ಮಾಲಿನ್ಯ ನಿಯಂತ್ರಣ ಕ್ರಮಗಳ ಅಳವಡಿಕೆ</td><td>ಕ್ರಮ ಕೈಗೊಳ್ಳುವುದಕ್ಕಾಗಿ ಶೇ.50 ರಷ್ಟು</td><td>ರೂ.1.00 ಲಕ್ಷ</td></tr>
</table>
</td></tr>
<tr><td>ಆ)</td><td>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 'ಹೆಲಿ ಟ್ಯೂರಿಸಂ' ಯೋಜನೆಯಡಿ ಎಷ್ಟು ಪ್ರವಾಸಿ ತಾಣಗಳನ್ನು ಪರಿಗಣಿಸಲಾಗಿದೆ;</td><td>ಸದರಿ ಯೋಜನೆಯಲ್ಲಿ ಪ್ರಾಥಮಿಕ ಹಂತವಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ "ಧರ್ಮಸ್ಥಳ" ಮತ್ತು "ಮಂಗಳೂರು" ಪ್ರವಾಸಿ ತಾಣಗಳನ್ನು ಪರಿಗಣಿಸಿದ್ದು, ಮುಂಬರುವ ದಿನಗಳಲ್ಲಿ ಪ್ರಮುಖ ಪ್ರವಾಸಿ ಸ್ಥಳಗಳನ್ನು ಒಳಗೊಂಡಂತೆ ಸರ್ಕ್ಯೂಟ್ ರಚಿಸಲು ಹೆಲಿ ಟೂರಿಸಂ ಸೇವಾ ಪೂರೈಕೆದಾರರಿಗೆ ತಿಳಿಸಲಾಗಿರುತ್ತದೆ.</td></tr>
</table>

| | | |
|---|---|---|
| **ಇ)** | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 'ಹೆಲಿ ಟ್ಯೂರಿಸಂ' ಯೋಜನೆಯಡಿ ಪರಿಗಣಿಸಿರುವ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸರ್ಕಾರ ಇದುವರೆಗೆ ರೂಪಿಸಿರುವ ಕಾರ್ಯಕ್ರಮಗಳೇನು; | ಸದರಿ ಯೋಜನೆಯಡಿ ಪರಿಗಣಿಸಿರುವ ಪ್ರವಾಸಿ ತಾಣದಲ್ಲಿ ಪ್ರವಾಸಿ ತಾಣದ ಅಭಿವೃದ್ಧಿಗೆ ಸಂಬಂಧಿಸಿದಂತೆ ಈ ಯೋಜನೆಯು ಪ್ರಾಥಮಿಕ ಹಂತದಲ್ಲಿದ್ದು, ಪ್ರವಾಸಿಗರಿಗೆ ಅನುಕೂಲ ವಾಗುವಂತಹ Basic amenitiesಗಳನ್ನು ಒದಗಿಸಲು ಇಲಾಖೆಯು ಪರಿಶೀಲಿಸಿ, ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಲಭ್ಯತೆಗೆ ಅನುಗುಣವಾಗಿ ಮೂಲ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. |
| **ಈ)** | ಸದರಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ವಿನಿಯೋಗಿಸಿರುವ ಅನುದಾನವೆಷ್ಟು; ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು? (ವಿವರ ನೀಡುವುದು) | ಸದರಿ ಪ್ರವಾಸಿ ತಾಣದ ಅಭಿವೃದ್ಧಿಗೆ ಸಂಬಂಧಿಸಿದಂತೆ ಈ ಯೋಜನೆಯು ಪ್ರಾಥಮಿಕ ಹಂತದಲ್ಲಿದ್ದು, ತಾಣದ ಅಭಿವೃದ್ಧಿಗೆ ಮುಂದಿನ ದಿನಗಳಲ್ಲಿ ಪರಿಶೀಲಿಸಿ, ಆಯವ್ಯಯದಲ್ಲಿ ಒದಗಿಸಲಾದ ಅನುದಾನ ಲಭ್ಯತೆಗೆ ಅನುಗುಣವಾಗಿ ಅನುದಾನ ಕಾಯ್ದಿರಿಸಿ ಕೊಳ್ಳಲು ಕ್ರಮವಹಿಸಲಾಗುವುದು ಹಾಗೂ ಈವರೆಗೆ ಯಾವುದೇ ಅನುದಾನವನ್ನು ವಿನಿಯೋಗಿಸಿರುವುದಿಲ್ಲ. |

**TOR 48 TDV 2023**

**(ಆನಂದ್ ಸಿಂಗ್)**
ಪ್ರವಾಸೋದ್ಯಮ, ಜೀವಿಶಾಸ್ತ್ರ,
ಹಾಗೂ ಪರಿಸರ ಸಚಿವರು